ನಿ - 330
ಕ್ರ - 27

**<u>ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಬಸವರಾಜ ಎಸ್ ಹೊರಟ್ಟಿ ಇವರು ನಿಯಮ-330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಗೆ ಉತ್ತರ.</u>**

**ವಿಷಯ:-**

**ಕರ್ನಾಟಕ ಆರೋಗ್ಯ ಸಂಜೀವಿನಿ ನಗದು ರಹಿತ ಚಿಕಿತ್ಸಾ ಸೌಲಭ್ಯವನ್ನು ಸರ್ಕಾರಿ ನೌಕರರಿಗೆ ಮಂಜೂರು ಮಾಡಿ ದಿನಾಂಕ:05.09.2022ರಂದು ಸರ್ಕಾರಿ ಆದೇಶ ಹೊರಡಿಸಿರುವುದು ಸ್ವಾಗತಾರ್ಹ.**

**ಆದರೆ ಯಾವುದೇ ಉಚಿತ ವೈದ್ಯಕೀಯ ಸೌಲಭ್ಯವಿಲ್ಲದೆ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯವು ಇಲ್ಲದೆ ಅನುದಾನಿತ ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಯನ್ನು ಈ ಯೋಜನೆಯ ವ್ಯಾಪ್ತಿಗೆ ತರಲೇಬೇಕು ಯಾಕೆಂದರೆ ಅನುದಾನಿತ ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳ ನೇಮಕಾತಿ ಪ್ರಾಧಿಕಾರ ಖಾಸಗಿ ಆಡಳಿತ ಮಂಡಳಿಗಳೆಂಬ ಒಂದೇ ಕಾರಣಕ್ಕೆ ಸರ್ಕಾರಿ ನೌಕರರಿಗೆ ಕೊಡುವ ಸೌಲಭ್ಯಗಳನ್ನು ವಿಸ್ತರಿಸಲಾಗುತ್ತಿಲ್ಲ.**

**ಅನುದಾನಿತ ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳು ಕೂಡ ಮಕ್ಕಳಿಗೆ ಶಿಕ್ಷಣ ನೀಡುವುದರ ಮೂಲಕ ಸಮಾಜಕ್ಕೆ ಹಾಗೂ ರಾಷ್ಟ್ರಕ್ಕೆ ತಮ್ಮ ಅತ್ಯಮೂಲ್ಯ ಸೇವೆ ಸಲ್ಲಿಸುತ್ತಿದ್ದು ಈ ಯೋಜನೆ ಅಡಿಯಡಿ ಅವರನ್ನೂ ಸೇರಿಸಿ ಆದೇಶ ಹೊರಡಿಸುವ ಕುರಿತಂತೆ ಪ್ರಸ್ತಾಪಿಸಲಾಗಿದೆ.**

**ಉತ್ತರ:**

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರಡಿ ರಾಜ್ಯ ಸರ್ಕಾರಿ ನೌಕರರಿಗೆ ಚಿಕಿತ್ಸೆ ಪಡೆದ ನಂತರ ಸದರಿ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಎಸ್.ಎಂ.ಆರ್ 2013, ದಿನಾಂಕ:18.08.2014ರನ್ವಯ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರುಗಳಿಗೆ ಆರೋಗ್ಯ ಸಂಜೀವಿನಿ ಯೋಜನೆಯಡಿ 7 ಮಾರಣಾಂತಿಕ ಖಾಯಿಲೆಗಳಿಗೆ ಸಂಬಂಧಿಸಿದಂತೆ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ.

ಆದರೆ, ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.

ಮುಂದುವರೆದು, ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ನೌಕರರು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ, ಅನುದಾನಿತ ಶಾಲಾ-ಕಾಲೇಜುಗಳ ಶಿಕ್ಷಕರು ಮತ್ತು ನೌಕರರು ಆರೋಗ್ಯ ಸಂಜೀವಿನಿ ಯೋಜನೆಯ ನಗದು ರಹಿತ ಚಿಕಿತ್ಸಾ ವ್ಯಾಪ್ತಿಗೆ ಬರುವುದಿಲ್ಲ.

**ಸಂಖ್ಯೆ: ಇಪಿ 437 ಎಸ್‌ಇಎಸ್ 2022**

(ಬಿ.ಸಿ.ನಾಗೇಶ್)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**